# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1366

ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 19-03-2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಸಾರಿಗೆ ಇಲಾಖೆಯಿಂದ ರಾಜ್ಯದ ರಾಜಧಾನಿ ಹಾಗೂ ಕೆಲವು ಜಿಲ್ಲಾ ಕೇಂದ್ರಗಳ ನಡುವೆ ಬಸ್ಸು ಸೇವೆಗಳನ್ನು ಆರಂಭಿಸಿದ್ದು ಉಳಿದ ಜಿಲ್ಲೆಗಳಲ್ಲಿ ಆದಾಯ ತರುವ ಸೇವೆಗಳನ್ನು ಒದಗಿಸಲು ಯಾವಾಗ ಕ್ರಮವಹಿಸಲಾಗುತ್ತಿದೆ; | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಕೇಂದ್ರಗಳಿಗೆ ರಾಜ್ಯದ ರಾಜಧಾನಿಯಿಂದ ಸಾರಿಗೆ ಸೌಲಭ್ಯವನ್ನು ಕಲ್ಪಿಸಿರುವ ವಿವರ ಕೆಳಕಂಡಂತಿದೆ:-<br><br>**ನಿಗಮ/ಸಂಸ್ಥೆ** — **ಜಿಲ್ಲಾ ವ್ಯಾಪ್ತಿ**<br>ಕ.ರಾ.ರ.ಸಾ.ನಿಗಮ — 17<br>ವಾ.ಕ.ರ.ಸಾ.ಸಂಸ್ಥೆ — 6<br>ಕ.ಕ.ರ.ಸಾ.ನಿಗಮ — 8<br>**ಒಟ್ಟು** — **31**<br><br>ಮುಂದುವರೆದು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಬೆಂಗಳೂರು ನಗರ ಮತ್ತು ಹೊರವಲಯದ ವ್ಯಾಪ್ತಿಯಲ್ಲಿ ಕಾರ್ಯಾಚರಣೆಗೊಳಿಸುತ್ತಿದೆ |
| ಆ. | ಸಾರಿಗೆ ಇಲಾಖೆಯಿಂದ ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣ ವ್ಯವಸ್ಥೆ ನೀಡಲಾಗುತ್ತಿದ್ದು ಖಾಸಗಿ ಸಾರಿಗೆ ವಾಹನಗಳ ಹೆಚ್ಚು ಪ್ರಾಬಲ್ಯವಿರುವ ಪ್ರದೇಶಗಳಿಗೆ ರಸ್ತೆ ಸಾರಿಗೆ ಸೌಲಭ್ಯ ವಿಸ್ತರಿಸಲು ಏನು ಕ್ರಮ ವಹಿಸಿದೆ; | **ಕ.ರಾ.ರ.ಸಾ.ನಿಗಮ**<br>ಖಾಸಗಿ ಸಾರಿಗೆ ವಾಹನಗಳ ಹೆಚ್ಚು ಪ್ರಾಬಲ್ಯವಿರುವ ಪ್ರದೇಶಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿ ಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ, ಬೇಡಿಕೆಯಿರುವ ಮಾರ್ಗಗಳಿಗೆ ಪರವಾನಗಿಗಳನ್ನು ಪಡೆದು ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳುವುದು ನಿರಂತರ ಪ್ರಕ್ರಿಯೆಯಾಗಿರುತ್ತದೆ.<br><br>**ಬೆಂ.ಮ.ಸಾ.ಸಂಸ್ಥೆ**<br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಿಂದ 25.0 ವರೆಗೆ ಕಾರ್ಯಾಚರಣೆ ವ್ಯಾಪ್ತಿಯನ್ನು ಹೊಂದಿದ್ದು, ಸಂಸ್ಥೆಯ ಕಾರ್ಯಾಚರಣೆ ವ್ಯಾಪ್ತಿಗೆ ಒಳಪಡುವ ಹಾಗೂ ಬಸ್ಸುಗಳ ಕಾರ್ಯಾಚರಣೆಗೆ ಸೂಕ್ತ ರಸ್ತೆಗಳಿರುವ ಎಲ್ಲಾ ಪ್ರದೇಶಗಳಿಗೂ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿದೆ. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>ವಾ.ಕ.ರ.ಸಾ.ಸಂಸ್ಥೆ<br>ಸಂಸ್ಥೆಯ ವ್ಯಾಪ್ತಿಯಲ್ಲಿನ ಪ್ರದೇಶವು ರಾಷ್ಟ್ರೀಕೃತ ವಲಯವಾಗಿರುವುದರಿಂದ ಖಾಸಗಿ ಸಾರಿಗೆ ವಾಹನಗಳು ಪ್ರಾಭಲ್ಯವಿರುವುದಿಲ್ಲ.<br>ವಿದ್ಯಾರ್ಥಿ/ ಸಾರ್ವಜನಿಕರಿಂದ ಸಾರಿಗೆ ಸೌಲಭ್ಯ ಕೋರಿ ಬಂದ ಬೇಡಿಕೆ/ಅವಶ್ಯಕತೆಗೆ ಅನುಗುಣವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಿಸುವ ಕ್ರಮ ನಿರಂತರ ಜಾರಿಯಲ್ಲಿದೆ.<br><br>ಕ.ಕ.ರ.ಸಾ.ನಿಗಮ<br>ನಿಗಮದಲ್ಲಿ ಹೆಚ್ಚಿನ ರಾಷ್ಟ್ರೀಕೃತ ಮಾರ್ಗಗಳಿದ್ದು ನಿಗಮದ ವತಿಯಿಂದ ಎಲ್ಲಾ ಕಡೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಬಳ್ಳಾರಿ ಮತ್ತು ಹೊಸಪೇಟೆ ವಿಭಾಗದ ವ್ಯಾಪ್ತಿಯ ಕೆಲವು ಪ್ರದೇಶಗಳಲ್ಲಿ ಖಾಸಗಿ ಸಾರಿಗೆಗಳ ಪ್ರಾಬಲ್ಯವಿದ್ದು, ಖಾಸಗಿ ಸಾರಿಗೆ ವಾಹನಗಳ ಪ್ರಾಬಲ್ಯವಿರುವ ಪ್ರದೇಶಗಳಲ್ಲಿ ಹೆಚ್ಚುವರಿ ಬೇಡಿಕೆ ಬಂದಲ್ಲಿ, ನಿಗಮದ ಸಾರಿಗೆಗಳ ಕಾರ್ಯಾಚರಣೆಗೆ ಪರವಾನಗಿಗಳನ್ನು ಪಡೆಯುವುದು ಅತ್ಯವಶ್ಯಕ ವಾಗಿರುತ್ತದೆ. ಅದಾಗ್ಯೂ, ಬೇಡಿಕೆ/ ಅವಶ್ಯಕತೆ ಗನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ, ಬೇಡಿಕೆಯಿರುವ ಮಾರ್ಗಗಳಿಗೆ ಪರವಾನಗಿಗಳನ್ನು ಪಡೆದು ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳುವ ನಿರಂತರ ಪ್ರಕ್ರಿಯೆಯಾಗಿರುತ್ತದೆ.</td></tr>
<tr><td>ಇ.</td><td>ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣ ಸೌಲಭ್ಯ ಒದಗಿಸುವುದರ ಜೊತೆಗೆ ಪುರುಷ ಪ್ರಯಾಣಿಕರನ್ನು ಆಕರ್ಷಿಸಿ ಆದಾಯ ಹೆಚ್ಚಿಸುವ ಬಗ್ಗೆ ಇಲಾಖೆಯ ಕ್ರಮಗಳೇನು? ಖಾಸಗಿ ಮತ್ತು ಸರ್ಕಾರಿ ಬಸ್ಸು ಸೇವೆಗಳ ಗುಣಮಟ್ಟವನ್ನು ಸಾರಿಗೆ ದರ ಮತ್ತಿತರ ವಿಷಯಗಳಲ್ಲಿ ಏಕರೂಪತೆಯನ್ನು ಸಾಧಿಸಲು ಇಲಾಖೆಯ ಕ್ರಮಗಳೇನು;</td><td rowspan="2"><u>ಕ.ರಾ.ರ.ಸಾ.ನಿಗಮ</u><br>ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣ ಸೌಲಭ್ಯ ಒದಗಿಸಿರುವುದರಿಂದ ಪ್ರಯಾಣಿಕರ ಸಂಖ್ಯೆ ಹೆಚ್ಚಾದ ಹಿನ್ನೆಲೆಯಲ್ಲಿ, ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಿ, ಇತರೆ ಪ್ರಯಾಣಿಕರಿಗೆ ಅಂದರೆ, ಪುರುಷ, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ರವರುಗಳಿಗೆ ಅನುಕೂಲ ಮಾಡಲು ಮತ್ತು ಆದಾಯವನ್ನು ಹೆಚ್ಚಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:<br><br>ಶಕ್ತಿ ಯೋಜನೆ ಜಾರಿಗೂ ಮೊದಲು ನಿಗಮದ ವತಿಯಿಂದ 7482 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ</td></tr>
<tr><td>ಈ.</td><td>ಕೆಲವು ಪ್ರದೇಶಗಳಲ್ಲಿ ದರ ಸಮರ ಜಾರಿಯಲ್ಲಿದ್ದು ಸಾರಿಗೆ ಇಲಾಖೆಯ ಬಸ್ಸು ಸೇವೆ ಖಾಸಗಿಯವರಿಗಿಂತ ದುಬಾರಿಯಾಗಿರುವುದನ್ನು ಸರಿಪಡಿಸಲು ಯಾವ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆ; (ವಿವರ ನೀಡುವುದು)</td></tr>
</table>

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| | | ನಂತರದಲ್ಲಿ ಪ್ರಸ್ತುತ 8069 ಅನುಸೂಚಿಗಳನ್ನು ಮಾಡಲಾಗುತ್ತಿದೆ. ಅಂದರೆ, ಪ್ರತಿದಿನ 587 ಹೆಚ್ಚುವರಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಶಕ್ತಿ ಯೋಜನೆ ಜಾರಿಗೂ ಮೊದಲು ನಿಗಮದ ವತಿಯಿಂದ 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 50598 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 5343 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಪ್ರಸ್ತುತ, ಪರಿಷ್ಕೃತ ಕ್ರಿಯಾ ಯೋಜನೆ 2024-25 ಸಾಲಿನಲ್ಲಿ 404 ಹೊಸ ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದ್ದು, ಅದರಲ್ಲಿ 273 ಹೊಸ ಅನುಸೂಚಿಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ.<br><br>ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಗ್ರಾಮೀಣ ಭಾಗದ ಶಾಲಾ/ಕಾಲೇಜು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಆದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>**<u>ಬೆಂ.ಮ.ಸಾ.ಸಂಸ್ಥೆ</u>**<br>ಸಂಸ್ಥೆಯು ಬೆಂಗಳೂರು ನಗರ ಹಾಗೂ ಹೊರ ವಲಯದ ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ, ಸುಲಭ, ಸುರಕ್ಷಿತ ಸಾರಿಗೆ ಸೇವೆಯನ್ನು ಒದಗಿಸಲು ನಿರಂತರವಾಗಿ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ಪ್ರತಿದಿನ ಹವಾನಿಯಂತ್ರಿತ ಸಾರಿಗೆಗಳನ್ನು ಒಳಗೊಂಡಂತೆ 5867 ಅನುಸೂಚಿಗಳನ್ನು 61,631 ಸುತ್ತುವಳಿಗಳೊಂದಿಗೆ 12.06 ಲಕ್ಷ ಕಿ.ಮೀ.ಗಳಲ್ಲಿ ಬೆಂಗಳೂರು ನಗರ ಹಾಗೂ ಹೊರವಲಯದ ಪ್ರಯಾಣಿಕರ ದಟ್ಟಣೆ/ ಅವಶ್ಯಕತೆಗನುಗುಣವಾಗಿ ಕಾರ್ಯಾಚರಣೆ ಮಾಡುತ್ತಿದ್ದು, ಸರಾಸರಿ 40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಸಂಸ್ಥೆಯ ಸಾರಿಗೆಗಳಲ್ಲಿ ಹೆಚ್ಚಿನ ಸಂಖ್ಯೆಯ ಪ್ರಯಾಣಿಕರನ್ನು ಆಕರ್ಷಿಸಲು ಕೆಳಕಂಡಂತೆ ಕ್ರಮವಹಿಸಲಾಗಿದೆ:-<br><br>ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ ಹೊಸ ಮಾರ್ಗಗಳ ಪರಿಚಯ, ಹಾಲಿಯಿರುವ ಮಾರ್ಗಗಳಲ್ಲಿ ಅನುಸೂಚಿ/ಸುತ್ತುವಳಿಗಳ ಹೆಚ್ಚಳ, ಹೊಸ ಪ್ರದೇಶ/ಬಡಾವಣೆಗಳಿಗೆ ಹೊಸದಾಗಿ ಸಾರಿಗೆ ಸೌಲಭ್ಯ ನೀಡುವುದು, ಒಂದು ಪ್ರದೇಶದಿಂದ ಇನ್ನೊಂದು ಪ್ರದೇಶಕ್ಕೆ ನೇರ ಸಾರಿಗೆಗಳನ್ನು ಪ್ರಾರಂಭಿಸಲಾಗುತ್ತಿದೆ.<br><br>ಸಂಸ್ಥೆಯು ವಿವಿಧ ಮಾದರಿಯ ಸೇವೆಗಳಾದ ಸಾಮಾನ್ಯ, ವಜ್ರ, ವಾಯುವಜ್ರ, ಮೆಟ್ರೋ ಫೀಡರ್, ಸಾಂದರ್ಭಿಕ ಒಪ್ಪಂದ, ಖಾಯಂ ಗುತ್ತಿಗೆ ಹಾಗೂ ಡೆಡಿಕೇಟೆಡ್ ಸೇವೆಗಳನ್ನು ಕಾರ್ಯಾಚರಣೆ ಮಾಡುತ್ತಿದೆ.<br><br>ಬೆಂಗಳೂರು ರೌಂಡ್ಸ್, ವಂಡರ್-ಲಾ, ಈಶಾ ಫೌಂಡೇಷನ್ ಸೇವೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಸಾರ್ವಜನಿಕ ಪ್ರಯಾಣಿಕರಿಂದ ಧನಾತ್ಮಕ ಪ್ರತಿಕ್ರಿಯೆ ದೊರೆತಿರುತ್ತದೆ.<br><br>NICE ರಸ್ತೆಯಲ್ಲಿ ಪ್ರತಿ 5 ರಿಂದ 10 ನಿಮಿಷದ ಅಂತರದಲ್ಲಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡುತ್ತಿದ್ದು, ಸಾರ್ವಜನಿಕರಿಂದ ಧನಾತ್ಮಕ ಪ್ರತಿಕ್ರಿಯೆ ದೊರತಿರುತ್ತದೆ. ಸಾರ್ವಜನಿಕ ಬೇಡಿಕೆ ಹಾಗೂ ಜನದಟ್ಟಣೆ ಗನುಗುಣವಾಗಿ ಸಂಸ್ಥೆಯ ಅನುಸೂಚಿಗಳನ್ನು ಪರಿಷ್ಕರಿಸುವುದು ನಿರಂತರ ಕಾರ್ಯವಾಗಿರುತ್ತದೆ.<br><br>ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ವಿವಿಧ ರೀತಿಯ ರಿಯಾಯಿತಿ ಪಾಸುಗಳನ್ನು ವಿತರಣೆ ಮಾಡುತ್ತಿದೆ ಮತ್ತು ದೈನಿಕ, ಸಾಪ್ತಾಹಿಕ ಹಾಗೂ ಮಾಸಿಕ ಪಾಸುಗಳನ್ನು ಆನ್‌ಲೈನ್ ಮೂಲಕ Digital Pass ಪಡೆಯಲು ಕ್ರಮ ಕೈಗೊಳ್ಳಲಾಗಿದೆ.<br><br>ಮೆಟ್ರೋ ಪ್ರಯಾಣಿಕರಿಗೆ First and Last mile ಸಂಪರ್ಕವನ್ನು ಒದಗಿಸಲು ಮೆಟ್ರೋ ನಿಲ್ದಾಣಗಳಿಂದ ವಿವಿಧ ಬಡಾವಣೆಗಳಿಗೆ/ಸ್ಥಳಗಳಿಗೆ ಮೆಟ್ರೋ ಫೀಡರ್ ಸೇವೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಸಾರ್ವಜನಿಕರನ್ನು ಸಮೂಹ ಸಾರಿಗೆಯತ್ತ ಸೆಳೆಯಲು ಹಾಗೂ ನಗರದಲ್ಲಿ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸಲು ನಿರ್ಭಯಾ ಯೋಜನೆಯಡಿ Vehicle Tracking System, Passenger Information System, Mobile app ಗಳನ್ನು ಅನುಷ್ಠಾನಗೊಳಿಸಿದೆ. UPI Payment ಹಾಗೂ Digital Pass ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ.<br><br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಿಂದ 25.0 ಕಿ.ಮೀ.ರವರೆಗೆ ಕಾರ್ಯಾಚರಣೆ ವ್ಯಾಪ್ತಿಯನ್ನು ಹೊಂದಿದ್ದು, ತನ್ನ ಕಾರ್ಯಾಚರಣೆ ವ್ಯಾಪ್ತಿಯಲ್ಲಿ ಸಾರಿಗೆ ಸೌಲಭ್ಯವನ್ನು ಒದಗಿಸುವ ಏಕಸ್ವಾಮ್ಯತೆಯನ್ನು ಹೊಂದಿದ್ದು, ಖಾಸಗಿ ಪ್ರವರ್ತಕರೊಂದಿಗೆ ದರ ಸಮರ ಇರುವುದಿಲ್ಲ.<br><br>**<u>ವಾ.ಕ.ರ.ಸಾ.ಸಂಸ್ಥೆ</u>**<br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 4567 ಅನುಸೂಚಿಗಳಿಂದ 34676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ ಅಂದರೆ ಜನವರಿ-2025 ರ ಮಾಹೆಯ ಅಂತ್ಯಕ್ಕೆ 4763 ಅನುಸೂಚಿಗಳಿಂದ 37453 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 196 ಅನುಸೂಚಿಗಳನ್ನು ಹಾಗೂ ಒಟ್ಟು 2777 ಸರತಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಸಾಮಾನ್ಯ, ನಗರ, ವೇಗದೂತ, ರಾಜಹಂಸ, ಹವಾನಿಯಂತ್ರಿತ/ ಹವಾನಿಯಂತ್ರಿತವಲ್ಲದ ಸ್ಲೀಪರ್, ವೋಲ್ವೋ ಗೋಲ್ಡ್‌ಕ್ಲಾಸ್, ವೋಲ್ವೋ ಕ್ಲಬ್ ಕ್ಲಾಸ್ ಮತ್ತು ಅಂಬಾರಿ ಉತ್ಸವ ಮಾದರಿಯ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಸಂಸ್ಥೆಯ ವ್ಯಾಪ್ತಿಯಿಂದ ವಿವಿಧ ಅಂತರ್ ರಾಜ್ಯಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.<br><br>ಮುಂಗಡ ಆಸನ ಕಾಯ್ದಿರಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಸಂಸ್ಥೆಯ ಸಾರಿಗೆಗಳಲ್ಲಿ ಮುಂಗಡ ಆಸನಗಳನ್ನು ಗುಂಪಾಗಿ (ಅಂದರೆ ನಾಲ್ಕು ಜನ ಮತ್ತು ಅದಕ್ಕೆ ಮೇಲ್ಪಟ್ಟು) ಕಾಯ್ದಿರಿಸಿದಲ್ಲಿ ಶೇ.5ರಷ್ಟು ವಿಶೇಷ ರಿಯಾಯಿತಿಯನ್ನು ಕಲ್ಪಿಸಲಾಗಿದೆ. ಹಾಗೂ ಮುಂಗಡ ಆಸನವನ್ನು ಹೋಗುವ ಮತ್ತು ಬರುವ (Onward/Return) ಒಮ್ಮೆಲೆ ಕಾಯ್ದಿರಿಸಿದಲ್ಲಿ ಬರುವ (Return) ಪ್ರಯಾಣಕ್ಕೆ ಶೇ.10ರಷ್ಟು ವಿಶೇಷ ರಿಯಾಯಿತಿಯನ್ನು ಕಲ್ಪಿಸಲಾಗಿದೆ.<br><br>ಪ್ರಯಾಣಿಕರ ಅನುಕೂಲಕ್ಕಾಗಿ ಸಾರಿಗೆಗಳ ಮಾಹಿತಿಯನ್ನು ಬಸ್ ನಿಲ್ದಾಣಗಳಲ್ಲಿ ಸಾರ್ವಜನಿಕ ಉದ್ಘೋಷಣಾ ವ್ಯವಸ್ಥೆಯ ಮುಖಾಂತರ ತಿಳಿಸಲಾಗುತ್ತಿದೆ.<br><br>**<u>ಕ.ಕ.ರ.ಸಾ.ನಿಗಮ</u>**<br>ಜನದಟ್ಟಣೆ ಕಡಿಮೆ ಮಾಡಲು ಹೆಚ್ಚುವರಿ ಅನುಸೂಚಿಗಳು/ ಕಿ.ಮೀ ಹಾಗೂ ಸರತಿ ಗಳನ್ನು ಒದಗಿಸಲಾಗಿದೆ.<br><br>ನಿಗಮದಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 4028 ಅನುಸೂಚಿಗಳಿಂದ 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ 4636 ಅನುಸೂಚಿಗಳಿಂದ 27200 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 608 ಅನುಸೂಚಿಗಳನ್ನು ಹಾಗೂ ಒಟ್ಟು 4986 ಸರತಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ತಡೆರಹಿತ ಸಾರಿಗೆಗಳನ್ನು ಪಾಯಿಂಟ್-to-ಪಾಯಿಂಟ್ ಮಾರ್ಗಗಳಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ರಿಯಾಯಿತಿ ದರದಲ್ಲಿ ಒಂದು ದಿನದ ಪಾಸ್/ ಮಾಸಿಕ ಪಾಸ್ ಗಳನ್ನು ನೀಡಲಾಗುತ್ತಿದೆ.<br>ಸಾಮಾನ್ಯ, ನಗರ, ವೇಗದೂತ, ಕಲ್ಯಾಣರಥ (ವೋಲ್ವೋ ಮಲ್ಟಿ ಆಕ್ಸಲ್ ಎಸಿ ಸ್ಲೀಪರ್), ಎಸಿ ಸ್ಲೀಪರ್ ಮತ್ತು ಅಮೋಘವರ್ಷ (ನಾನ್ ಎಸಿ ಸ್ಲೀಪರ್) ಸಾರಿಗೆಗಳನ್ನು ಕಾರ್ಯಾ ಚರಣೆ ಮಾಡಲಾಗುತ್ತಿದೆ.<br>ಸಾಮಾನ್ಯ, ನಗರ, ವೇಗದೂತ, ಕಲ್ಯಾಣರಥ (ವೋಲ್ವೋ ಮಲ್ಟಿ ಆಕ್ಸಲ್ ಎಸಿ ಸ್ಲೀಪರ್), ಎಸಿ ಸ್ಲೀಪರ್ ಮತ್ತು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಅಮೋಘವರ್ಷ (ನಾನ್ ಎಸಿ ಸ್ಲೀಪರ್) ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>ರಾಜ್ಯದ ನಾಲ್ಕು ಸಾರಿಗೆ ನಿಗಮಗಳಲ್ಲಿನ ಡೀಸೆಲ್ ತೈಲ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿ ವೆಚ್ಚ, ವಾಹನ ಬಿಡಿ ಭಾಗಗಳ ವೆಚ್ಚ ಒಳಗೊಂಡಂತೆ ಒಟ್ಟು ಕಾರ್ಯಾಚರಣೆ ವೆಚ್ಚ ಹೆಚ್ಚಾಗಿ ನಿಗಮಗಳಿಗೆ ಹೆಚ್ಚಿನ ಆರ್ಥಿಕ ಹೊರೆಯುಂಟಾಗಿದ್ದ ಕಾರಣ ದಿನಾಂಕ:04.01.2025ರಂತೆ ಶೇಕಡ15ರಷ್ಟು ಪ್ರಯಾಣಿಕ ಬಸ್ ಪ್ರಯಾಣದರಗಳನ್ನು ಪರಿಷ್ಕರಣೆ ಮಾಡಲಾಗಿದೆ.<br>**<u>ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮ</u>**<br>ಖಾಸಗಿ ಪ್ರವರ್ತಕರೊಂದಿಗೆ ಪೈಪೋಟಿ ನೀಡಲು ಆಯ್ದ ಮಾರ್ಗಗಳಲ್ಲಿ ಪ್ರೋತ್ಸಾಹಕ ಪ್ರಯಾಣದರಗಳನ್ನು ಆಕರಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರೋತ್ಸಾಹಕ ದರಗಳನ್ನು ಆಕರಿಸಿ ಕಾರ್ಯಾಚರಿಸುವ ಸಾರಿಗೆಗಳ ವಿವರಗಳನ್ನು 'ಅನುಬಂಧ' ದಲ್ಲಿ ನೀಡಲಾಗಿದೆ. |
| ಉ. | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮಾಂತರ ಒಳ ಪ್ರದೇಶಗಳಲ್ಲಿ ಹೊಸ ಮಾರ್ಗಗಳು ಅಭಿವೃದ್ಧಿಯಾಗಿದ್ದು ಅವುಗಳಲ್ಲಿ ಮತ್ತು ನಗರ ಪ್ರದೇಶದಲ್ಲಿ ಹೆಚ್ಚುವರಿ ಸಾರಿಗೆ ಸೌಲಭ್ಯ ಒದಗಿಸುವಂತೆ ಜನಪ್ರತಿನಿಧಿಗಳು/ವಿದ್ಯಾರ್ಥಿಗಳು/ಸಾರ್ವಜನಿಕರಿಂದ ಇಲಾಖೆಗೆ ಸಲ್ಲಿಸಿರುವ ಬೇಡಿಕೆಗಳನ್ನು ಯಾವ ಕಾಲ ಮಿತಿಯಲ್ಲಿ ಈಡೇರಿಸಲು ಕ್ರಮವಹಿಸಲಾಗುವುದು? | **ಕ.ರಾ.ರ.ಸಾ.ನಿಗಮ**<br>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ನಿಗಮದ ಮಂಗಳೂರು ಮತ್ತು ಪುತ್ತೂರು ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ.<br>ಕರ್ನಾಟಕ ಸರ್ಕಾರದ ಶಕ್ತಿ ಯೋಜನೆ ಜಾರಿಗೆ ಬಂದ ನಂತರ ಸದರಿ ಯೋಜನೆಯ ಸದುಪಯೋಗವನ್ನು ಪಡೆಯುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮಾಂತರ ಮತ್ತು ನಗರ ಪ್ರದೇಶಗಳಿಗೆ ಹೊಸದಾಗಿ/ಹೆಚ್ಚಿನ ಸಾರಿಗೆ ಸೌಲಭ್ಯವನ್ನು ಕಲ್ಪಿಸುವಂತೆ ಕೋರಿ ಜನಪ್ರತಿನಿಧಿಗಳು/ ಸಾರ್ವಜನಿಕ ಪ್ರಯಾಣಿಕರು/ವಿದ್ಯಾರ್ಥಿಗಳಿಂದ ಬೇಡಿಕೆಗಳು ಸ್ವೀಕೃತವಾಗಿರುತ್ತವೆ.<br>ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸುವಂತೆ ಕೋರಿ ಒಟ್ಟು 303 ಮನವಿಗಳು ಸ್ವೀಕೃತವಾಗಿದ್ದು, 79 ಮನವಿಗಳನ್ನು ಪರಿಗಣಿಸಲಾಗಿದ್ದು, 224 ಬೇಡಿಕೆಗಳು ಬಾಕಿಯಿರುತ್ತವೆ.<br>ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸುವಂತೆ ಕೋರಿ ಒಟ್ಟು 131 ಮನವಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಸ್ವೀಕೃತವಾಗಿದ್ದು, 64 ಮನವಿಗಳನ್ನು ಪರಿಗಣಿಸಲಾಗಿದ್ದು, 67 ಬೇಡಿಕೆಗಳು ಬಾಕಿಯಿರುತ್ತವೆ.<br>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳು ಖಾಸಗಿ ವಲಯವಾಗಿದ್ದು, ನಿಗಮದ ಸಾರಿಗೆಗಳ ಕಾರ್ಯಾಚರಣೆಗೆ ಪರವಾನಗಿಗಳನ್ನು ಪಡೆಯುವುದು ಅತ್ಯವಶ್ಯಕವಾಗಿರುವುದರಿಂದ ಬೇಡಿಕೆಯಿರುವ ಮಾರ್ಗಗಳಿಗೆ ಪರವಾನಗಿ ಕೋರಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಮಂಗಳೂರು ಇವರಲ್ಲಿ ಅರ್ಜಿ ಸಲ್ಲಿಸಲಾಗಿರುತ್ತದೆ.<br>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ಬಸ್‌ಗಳನ್ನು ಖರೀದಿಸಿರಲಿಲ್ಲ ಹಾಗೂ 2023-24ರ ಪೂರ್ವದ 07 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರಲಿಲ್ಲ.<br>ಪ್ರಸ್ತುತ ನಿಗಮದ 2000 ಚಾಲಕ-ಕಂ-ನಿರ್ವಾಹಕ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಪೂರ್ಣಗೊಂಡ ಕೂಡಲೇ ಆಯ್ಕೆಪಟ್ಟಿ ಪ್ರಕಟಿಸಿ ವಿಭಾಗಗಳಿಗೆ ಹಂಚಿಕೆ ಮಾಡಲಾಗುವುದು.<br>ಮುಂದುವರೆದು, ಚಾಲಕ–ಕಂ-ನಿರ್ವಾಹಕ ಹುದ್ದೆಗಳ ಚಾಲನಾ ವೃತ್ತಿ ಪರೀಕ್ಷೆಯು ಮೇ-2025 ನೇ ತಿಂಗಳಲ್ಲಿ ಪೂರ್ಣಗೊಳ್ಳುವ ಸಾಧ್ಯತೆ ಇದೆ ಹಾಗೂ ನಿಗಮದಲ್ಲಿ 2024-25ನೇ ಸಾಲಿನಲ್ಲಿ 904 ನೂತನವಾಗಿ ಬಸ್ಸುಗಳನ್ನು ಖರೀದಿಸಲಾಗಿದೆ.<br>ಅಲ್ಲದೇ, ಪ್ರಸ್ತುತ ನಿಗಮದಲ್ಲಿ ಚಾಲನಾ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ಚಾಲನಾ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡು ನಿಗಮಕ್ಕೆ ಚಾಲನಾ ಸಿಬ್ಬಂದಿ /ಹೊಸ ವಾಹನಗಳು ಸೇರ್ಪಡೆಯಾದ ನಂತರ ಹಾಗೂ ಪರವಾನಗಿಗಳು ಮಂಜೂರಾದ ನಂತರ ಬೇಡಿಕೆಯಿರುವ ಮಾರ್ಗಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಟಿಡಿ 83 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)

**ಸಾರಿಗೆ ಮತ್ತು ಮುಜರಾಯಿ ಸಚಿವರು**